ಒಂದನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹುಣಸೂರು

ಸಿ.ಸಿ. 501/2023

ಸಿ.ಡಬ್ಲ್ಯೂ-1 ಪಿ.ಡಬ್ಲ್ಯೂ,1

ದಿಃ **17.03.2026** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

| | |
|---|---|
| ಸಾಕ್ಷಿಯ ಹೆಸರು | ಗಿರಿಜಾ |
| ಗಂಡ/ತಂದೆಯ ಹೆಸರು | ಕಸ್ತೂರಿ ಶೆಟ್ಟಿ |
| ವಯಸ್ಸು | 45 ವರ್ಷ |
| ಕೆಲಸ | ವ್ಯವಸಾಯ |
| ವಾಸಸ್ಥಳ | ರಾಮಪಟ್ಟಣ |

**<u>ಮುಖ್ಯ ವಿಚಾರಣೆ ಮಾನ್ಯ ಎ.ಪಿ.ಪಿ.ಯವರಿಂದ:</u>**

ಆರೋಪಿತರು ಗೊತ್ತು. ಚಾಸಾ2 ರಿಂದ 7 ಗೊತ್ತು. ನಮ್ಮ ಹಾಗೂ ಆರೋಪಿತರ ನಡುವೆ ಬಾಯಿಮಾತಿನ ಜಗಳವಾಗಿದ್ದು, ಈ ಬಗ್ಗೆ ನಾನು ಪೊಲೀಸರಿಗೆ ಮೌಖಿಕವಾಗಿ ತಿಳಿಸಿದ್ದೇ. ಆ ಸಮಯದಲ್ಲಿ ಪೊಲೀಸರು ಈಗ ತೋರಿಸುತ್ತಿರುವ ಎರಡು ಬರವಣಿಗೆಗಳ ಮೇಲೆ ನನ್ನ ಸಹಿಯನ್ನು ಪಡೆದಿರುತ್ತಾರೆ. ಸಾಕ್ಷಿ ತನ್ನ ಸಹಿ ಇರುವ ಎರಡು ಬರವಣಿಗೆಗಳನ್ನು ನೋಡಿ ಗುರುತಿಸಿದ್ದು, ಅವುಗಳು ದೂರು ಮತ್ತು ಮಹಜರ್ ಆಗಿದ್ದು ಅವುಗಳನ್ನು ನಿಪಿ-1 ಮತ್ತು 2 ಎಂದು, ಅದರ ಮೇಲಿರುವ ಸಾಕ್ಷಿಯ ಸಹಿಗಳನ್ನು 1(ಎ) ಮತ್ತು 2(ಎ) ಎಂದು ಗುರುತಿಸಲಾಯಿತು. ನಿಪಿ-1 ಮತ್ತು 2 ರಲ್ಲಿ ಬರೆದಿರುವ ವಿಚಾರಗಳು ನನಗೆ ತಿಳಿದಿಲ್ಲ. ನನ್ನ ಸಮಕ್ಷಮ ಯಾವುದೇ ಮಹಜರ್ ಕ್ರಮ ಕೈಗೊಂಡಿರುವುದಿಲ್ಲ. ನಾನು ನ್ಯಾಯಾಲಯದ ಮುಂದೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ. ಹೇಳಿಕೆಯನ್ನು ನಿಪಿ3 ಮತ್ತು ಸಾಕ್ಷಿ ಸಹಿಯನ್ನು ನಿಪಿ3(ಎ) ಮತ್ತು 3(ಬಿ) ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಸ.ಸ.ಅ. ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಅನುಮತಿ ನೀಡಲಾಗಿದೆ.)**

**<u>ಪಾಟೀ ಸವಾಲು ಮಾನ್ಯ ಎ.ಪಿ.ಪಿ ರವರಿಂದಃ</u>**

ದಿಃ 10.08.2023 ರಂದು ಸಂಜೆ 4 ಗಂಟೆ ಸಮಯದಲ್ಲಿ ನಾನು ನಮ್ಮ ಜಮೀನಿಗೆ ನಡೆದುಕೊಂಡು ಹೋಗುತ್ತಿದ್ದಾಗ 3ನೇ ಆರೋಪಿಗೆ ಸೇರಿರುವ ಜಮೀನಿನಲ್ಲಿ ನಾವುಗಳು ತಿರುಗಾಡುವ ದಾರಿಗೆ ಬೇವಿನ ಮರವನ್ನು ಅಡ್ಡ ಹಾಕಿದ್ದರು ಎಂದರೆ ಸರಿಯಲ್ಲ. ಆಗ ನಾನು ಆರೋಪಿತರಿಗೆ ಏಕೆ ಹೀಗೆ ಮರವನ್ನು ಅಡ್ಡಹಾಕಿದ್ದೀರಿ ಎಂದು ಕೇಳಿದಾಗ 1ನೇ ಆರೋಪಿ ಏಕಾಏಕಿ ಬಂದು ಅವಾಚ್ಯಶಬ್ದಗಳಿಂದ ನಿಂದಿಸಿದರು ಎಂದರೆ ಸರಿಯಲ್ಲ. ನಂತರ 1ನೇ ಆರೋಪಿ ನನ್ನ ಬಟ್ಟೆಯನ್ನು ಹಿಡಿದು ಎಳೆದಾಡಿ ನನ್ನ ರವಿಕೆಯನ್ನು ಹರಿದು ಹಾಕಿ

ನನ್ನ ಮೈಕೈಗೆ ಹೊಡೆದನು ಎಂದರೆ ಸರಿಯಲ್ಲ. 2ನೇ ಆರೋಪಿ ತನ್ನ ಕೈಯಲ್ಲಿದ್ದ ಒಂದು ದೊಣ್ಣೆಯಿಂದ ನನ್ನ ಎಡಭಾಗದ ಹಣೆಗೆ ಹೊಡೆದರು ಎಂದರೆ ಸರಿಯಲ್ಲ. ನಾನು ಕೆಳಕ್ಕೆ ಬಿದ್ದಾಗ 3ನೇ ಆರೋಪಿ ಬಂದು ಕಾಲಿನಿಂದ ನನ್ನ ಹೊಟ್ಟೆಯ ಭಾಗಕ್ಕೆ ಒದ್ದು ನೋವುಂಟು ಮಾಡಿದನು ಎಂದರೆ ಸರಿಯಲ್ಲ. ನಾನು ನೋವಿನಿಂದ ಕಿರುಚಿಕೊಂಡಾಗ ಚಾಸಾ4 ಮತ್ತು 5ರವರು ಬಂದು ಜಗಳವನ್ನು ಸಮಾಧಾನಪಡಿಸಿದರು ಎಂದರೆ ಸರಿಯಲ್ಲ. ನಂತರ ಆರೋಪಿತರು ಕೊಲೆ ಬೆದರಿಕೆ ಹಾಕಿದರು ಎಂದರೆ ಸರಿಯಲ್ಲ. ನಂತರ ಚಾಸಾ6 ನನ್ನನ್ನು ಹುಣಸೂರಿನ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಬಂದು ಚಿಕಿತ್ಸೆಯನ್ನು ಕೊಡಿಸಿದನು ಎಂದರೆ ಸರಿಯಲ್ಲ. ಈ ವಿಚಾರವಾಗಿ ಗ್ರಾಮದಲ್ಲಿ ತೀರ್ಮಾನ ಮಾಡಿಕೊಳ್ಳೋಣ ಸುಮ್ಮನಿದ್ದೆ, ಆರೋಪಿತರು ತೀರ್ಮಾನಕ್ಕೆ ಬಾರದ ಕಾರಣ ತಡವಾಗಿ ದೂರನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಈಗ ಓದಿ ಹೇಳಿದಂತೆ ದೂರನ್ನು ನೀಡಿದ್ದೇನೆಂದರೆ ಸರಿಯಲ್ಲ. ಈ ವಿಚಾರವಾಗಿ ನಿಪಿ3ರಂತೆ ನ್ಯಾಯಾಲಯದ ಮುಂದೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ.

ದಿಃ15.08.2023 ರಂದು ಮಧ್ಯಾಹ್ನ 3 ರಿಂದ 3.45 ಗಂಟೆ ಸಮಯದಲ್ಲಿ ಪೊಲೀಸರು ಘಟನಾ ಸ್ಥಳಕ್ಕೆ ಬಂದಿದ್ದು, ಅಲ್ಲಿ ನಾನು ಹಾಜರಿದ್ದು, ಘಟನಾ ಸ್ಥಳವನ್ನು ತೋರಿಸಿದ ಮೇರೆಗೆ ಚಾಸಾ-2 ಮತ್ತು 3 ರವರ ಸಮಕ್ಷಮ ನಿಪಿ-2 ರಂತೆ ಮಹಜರ್ ಕ್ರಮ ಕೈಗೊಂಡು, ನಿಪಿ-2 ಕ್ಕೆ ಅಲ್ಲಿಯೇ ನನ್ನ ಸಹಿ ಪಡೆದಿರುತ್ತಾರೆಂದರೆ ಸರಿಯಲ್ಲ. ಮಹಜರ್ ಸಮಯದಲ್ಲಿ ದೊಣ್ಣೆ ಹಾಗೂ ರವಿಕೆಯನ್ನು ಅಮಾನತ್ತುಪಡಿಸಿಕೊಂಡರು ಎಂದರೆ ಸರಿಯಲ್ಲ.

ಆರೋಪಿತರೊಂದಿಗೆ ರಾಜಿ ಮಾಡಿಕೊಂಡಿದ್ದೇವೆಂದರೆ ನಿಜ. ಆ ಕಾರಣಕ್ಕಾಗಿ ಈ ದಿನ ಉದ್ದೇಶಪೂರ್ವಕವಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ನಿಜವಲ್ಲ.

**ಪಾಟೀಸವಾಲು ಆರೋಪಿತರ ಪರಃ** ಪಾಟೀಸವಾಲು ಇಲ್ಲ ಎಂದು ಹೇಳಿರುತ್ತಾರೆ.

**ಮರುವಿಚಾರಣೆ ಇಲ್ಲ.**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ ಹೇ ಕೇ ಸರಿ ಇದೆ.

ಒಂದನೇ ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ,
ಹುಣಸೂರು.